# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1422 |
| 2 | ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 10-03-2022 |
| 4 | ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿವಿಧ ವೃಂದಗಳ ಹುದ್ದೆಗಳಿಗೆ ವಿವಿಧ ಇಲಾಖೆಗಳಿಂದ ಎರವಲು ಸೇವೆಯ ಮೇಲೆ ನಿಯೋಜಿಸಿರುವ ಕುರಿತು ನಿಯೋಜನಾ ನೀತಿಯನ್ನು ರೂಪಿಸಿ ಸರ್ಕಾರಿ ಆದೇಶ ಮಾಡಲಾಗಿರುತ್ತದೆಯೇ; (ಸರ್ಕಾರದ ಆದೇಶದ ವಿವರ ಒದಗಿಸುವುದು) | ಹೌದು<br>ಆದೇಶದ ಪ್ರತಿಯನ್ನು **ಅನುಬಂಧ-1ರಲ್ಲಿ ನೀಡಿದೆ.** |
| ಆ) | ಸರ್ಕಾರದಿಂದ ರೂಪಿಸಲಾಗಿರುವ ನಿಯೋಜನಾ ನೀತಿಯ ಅನ್ವಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನಿರ್ದಿಷ್ಟ ವೃಂದಗಳಿಗೆ ನಿರ್ದಿಷ್ಟ ಇಲಾಖೆಗಳಿಂದ ಮಾತ್ರ ಎರವಲು ಸೇವೆಯ ಮೇಲೆ ನೇಮಕಾತಿ ಮಾಡಲು ಅವಕಾಶವಿದೆ; (ಬೆಂಗಳೂರು ಮಹಾನಗರ ಪಾಲಿಕೆಯ ನಿರ್ದಿಷ್ಟ ವೃಂದಗಳ ಮತ್ತು ಅವುಗಳಿಗೆ ಎರವಲು ಸೇವೆಯ ಮೇಲೆ ನಿಯೋಜಿಸಬಹುದಾದ ನಿರ್ದಿಷ್ಟ ಇಲಾಖೆಗಳ ವಿವರ ನೀಡುವುದು) | ಹೌದು<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ವಯ ಈ ಕೆಳಕಂಡ ಇಲಾಖೆಗಳಿಂದ ಎರವಲು ಸೇವೆಯ ಮೇಲೆ ಪಾಲಿಕೆಯಲ್ಲಿ ಕಾರ್ಯನಿರ್ವಹಿಸಲು ಅವಕಾಶವಿರುತ್ತದೆ.<br>1. ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ<br>2. ಪೌರಾಡಳಿತ ನಿರ್ದೇಶನಾಲಯ<br>3. ಸರ್ಕಾರದ ಕಾರ್ಮಿಕ ಇಲಾಖೆ<br>4. ಸರ್ಕಾರದ ಕಂದಾಯ ಇಲಾಖೆ<br>5. ಸರ್ಕಾರದ ಸರ್ವೆ ಮತ್ತು ಭೂದಾಖಲೆಗಳ ಇಲಾಖೆ<br>6. ಲೆಕ್ಕಪತ್ರ ಮತ್ತು ಲೆಕ್ಕಪರಿಶೋಧನಾ ಇಲಾಖೆ<br>7. ಪೊಲೀಸ್ ಇಲಾಖೆ<br>8. ಸಾರ್ವಜನಿಕ ಶಿಕ್ಷಣ ಇಲಾಖೆ<br>9. ಸಾರ್ವಜನಿಕ ಗ್ರಂಥಾಲಯ ಇಲಾಖೆ<br>10. ಲೋಕೋಪಯೋಗಿ ಇಲಾಖೆ<br>11. ರಾಷ್ಟ್ರೀಯ ಮಾಹಿತಿ ಕೇಂದ್ರ<br>12. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,<br>13. ನಗರ ಯೋಜನೆ ಇಲಾಖೆ<br>14. ಅರಣ್ಯ ಇಲಾಖೆ<br>15. ತೋಟಗಾರಿಕೆ ಇಲಾಖೆ<br>16. ಸಾಂಖ್ಯಿಕ ಇಲಾಖೆ |

| | | |
|---|---|---|
| ಇ) | ಸರ್ಕಾರದ ಮಟ್ಟದಲ್ಲಿ ರೂಪಿಸಲಾಗಿರುವ ನಿಯೋಜನಾ ನೀತಿಯನ್ನು ಪೂರ್ಣಪ್ರಮಾಣದಲ್ಲಿ ಅನುಷ್ಠಾನಗೊಳಿಸಲಾಗಿದೆಯೆ; | ಹಂತ ಹಂತವಾಗಿ ನಿಯೋಜನಾ ನೀತಿಯನ್ನು ಪೂರ್ಣಪ್ರಮಾಣದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. |
| ಈ) | ಹಾಗಿದ್ದಲ್ಲಿ, ನಿಯೋಜನಾ ನೀತಿಯನ್ನು ರೂಪಿಸಿ ಸರ್ಕಾರದಿಂದ ನೀಡಲಾಗಿದ್ದ ಆದೇಶ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು? | ಸರ್ಕಾರವು ನಿಯೋಜನಾ ನೀತಿಯನ್ನು ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವಿವಿಧ ಇಲಾಖೆಗಳಿಂದ ನಿಯೋಜನೆ ಮೇಲೆ ಮಂಜೂರಾದ ಹುದ್ದೆಗಳಿಗಿಂತ ಮೀರಿ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸುತ್ತಿರುವ ಹಾಗೂ ನಿಯೋಜನಾ ಅವಧಿ ಮುಕ್ತಾಯಗೊಂಡಿರುವ ಎಲ್ಲಾ ವೃಂದದ ಅಧಿಕಾರಿ/ಸಿಬ್ಬಂದಿಗಳನ್ನು ಸದರಿಯವರುಗಳ ಮಾತೃ ಇಲಾಖೆಗೆ ಹಿಂದಿರುಗಿಸಿ ಈ ಬಗ್ಗೆ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಪಾಲಿಕೆಗೆ ಈಗಾಗಲೇ ನಿರ್ದೇಶನ ನೀಡಲಾಗಿರುತ್ತದೆ. |

**ನಅಇ 125 ಎಂಎನ್‌ಯು 2022**

**(ಬಸವರಾಜ ಬೊಮ್ಮಾಯಿ)**
**ಮುಖ್ಯಮಂತ್ರಿ**

ವಿ. ಪ. ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ. 1422ರ ಅನುಬಂಧ.

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿವಿಧ ವೃಂದದ ಹುದ್ದೆಗಳಿಗೆ ವಿವಿಧ ಇಲಾಖೆಗಳಿಂದ ಎರವಲು ಸೇವೆಯ ಮೇಲೆ ನಿಯೋಜಿಸಲು ಕರ್ನಾಟಕ ಮುನಿಸಿಪಾಲ್ ಕಾರ್ಪೋರೇಷನ್ ಕಾಯ್ದೆ 1976 ರಡಿ ಹೊರಡಿಸಿರುವ ನಿಯೋಜನಾ ಮಾರ್ಗಸೂಚಿಯನ್ನು ಹಿಂಪಡೆದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿನಿಯಮ 2020 ರನ್ವಯ ಹೊಸ ನಿಯೋಜನಾ ನೀತಿಯನ್ನು/ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ನಅಇ 279 ಎಂಎನ್‌ಯು 2011 ದಿನಾಂಕ: 11-11-2011.
2) ದಿನಾಂಕ: 21-12-2020 ರಂದು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿರುವ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ 2020
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆರವರ ಅಧ್ಯಕ್ಷತೆಯಲ್ಲಿ ದಿನಾಂಕ: 23-03-2021 ರಂದು ನಡೆದ ಸಭೆ.

* * * * * *

<u>ಪ್ರಸ್ತಾವನೆ:</u>

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶ ಸಂಖ್ಯೆ: ನಅಇ 279 ಎಂಎನ್‌ಯು 2011, ದಿನಾಂಕ: 11-11-2011ರಲ್ಲಿ, ಕರ್ನಾಟಕ ಮುನ್ಸಿಪಲ್ ಕಾರ್ಪೋರೇಷನ್ ಕಾಯ್ದೆ, 1976 ರನ್ವಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿವಿಧ ವೃಂದಗಳ ಹುದ್ದೆಗಳಿಗೆ ವಿವಿಧ ಇಲಾಖೆಗಳಿಂದ ಎರವಲು ಸೇವೆಯ ಮೇಲೆ ನಿಯೋಜಿಸುವ ಬಗ್ಗೆ ನಿಯೋಜನಾ ನೀತಿಯನ್ನು ರೂಪಿಸಲಾಗಿರುತ್ತದೆ.

ಪ್ರಸ್ತುತ, ಮೇಲೆ (2) ರಲ್ಲಿ ಓದಲಾದ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ 2020ರ ಪರಿಚ್ಛೇದ 97, 98, 99, 100 ಮತ್ತು 105 ರನ್ವಯ ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1957 ನಿಯಮ 50 ಮತ್ತು 419ಕ್ಕೆ ಅನುಗುಣವಾಗಿರುವಂತೆ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ, 2020ರ ಹಾಗೂ ಬಿ.ಬಿ.ಎಂ.ಪಿ.ಯ ವೈಶಿಷ್ಟ್ಯತೆಗೆ ತಕ್ಕಂತೆ ಕೆಲವೊಂದು ವಿಶೇಷ ಅವಕಾಶಗಳನ್ನು ಸಹ ಕಲ್ಪಿಸಬೇಕಾಗಿರುವುದರಿಂದ ಮೇಲ್ಕಂಡ ಸರ್ಕಾರದ ಆದೇಶ ಸಂಖ್ಯೆ: ನಅಇ 279 ಎಂಎನ್‌ಯು 2011, ದಿನಾಂಕ: 11-11-2011ರ ಮಾರ್ಗಸೂಚಿಯನ್ನು ಹಿಂಪಡೆದು, ಹೊಸ ಮಾರ್ಗಸೂಚಿಯನ್ನು ರೂಪಿಸುವುದು ಅವಶ್ಯಕವೆಂದು ಕಂಡು ಬಂದಿರುತ್ತದೆ.

ಈ ಹಿನ್ನಲೆಯಲ್ಲಿ, ವಿಷಯದ ಬಗ್ಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ತಿಳಿಸಿರುವಂತೆ ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಅಧ್ಯಕ್ಷತೆಯಲ್ಲಿ ದಿನಾಂಕ: 23-03-2021 ರಂದು ನಡೆದ ಸಭೆಯಲ್ಲಿ ಪಾಲಿಕೆಯ ವಿವಿಧ ವೃಂದದ ಹುದ್ದೆಗಳಿಗೆ ಯಾವ ರೀತಿ ಎರವಲು ಸೇವೆಯ ಮೇಲೆ ತುಂಬಬೇಕೆಂಬುದರ ಬಗ್ಗೆ ಚರ್ಚಿಸಲಾಗಿರುತ್ತದೆ.

. . .2.

ಆದ್ದರಿಂದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿವಿಧ ವೃಂದಗಳ ಹುದ್ದೆಗಳಿಗೆ ವಿವಿಧ ಇಲಾಖೆಗಳಿಂದ ಎರವಲು ಸೇವೆಯ ಮೇಲೆ ನಿಯೋಜಿಸುವ ಬಗ್ಗೆ ಸರ್ಕಾರವು ಈ ಕೆಳಕಂಡ ಹೊಸ ನಿಯೋಜನಾ ಮಾರ್ಗಸೂಚಿಗಳನ್ನು ರೂಪಿಸಲು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ನಅಇ 142 ಎಂಎನ್‌ಯು 2021</u>**
**ಬೆಂಗಳೂರು, ದಿನಾಂಕ: 07-01-2022**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಮುನ್ಸಿಪಲ್ ಕಾರ್ಪೋರೇಷನ್ ಕಾಯ್ದೆ 1976 ರನ್ವಯ ರೂಪಿಸಿರುವ ಸರ್ಕಾರದ ಆದೇಶ ಸಂಖ್ಯೆ: ನಅಇ 279 ಎಂಎನ್‌ಯು 2011, ದಿನಾಂಕ: 11-11-2011ರ ಆದೇಶದಲ್ಲಿ ನಗರಾಭಿವೃದ್ಧಿ ಇಲಾಖೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಎರವಲು ಸೇವೆಯ ಮೇಲೆ ಪಾಲಿಕೆ ವಿವಿಧ ವೃಂದದ ಹುದ್ದೆಗಳಿಗೆ ನಿಯೋಜಿಸುವ ನೀತಿಯನ್ನು ರೂಪಿಸಿದ್ದು, ಪ್ರಸ್ತುತ ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1957ರ ನಿಯಮ 50 ಮತ್ತು 419ಕ್ಕೆ ಅನುಗುಣವಾಗಿರುವಂತೆ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ, 2020ರ ಪರಿಚ್ಛೇದ 97, 98, 99, 100 ಮತ್ತು 105 ರನ್ವಯ ಹಾಗೂ ಬಿ.ಬಿ.ಎಂ.ಪಿ.ಯ ವೈಶಿಷ್ಟ್ಯತೆಗೆ ತಕ್ಕಂತೆ ಕೆಲವೊಂದು ವಿಶೇಷ ಅವಕಾಶಗಳನ್ನು ಕಲ್ಪಿಸಬೇಕಾಗಿರುವ ಹಿನ್ನೆಲೆಯಲ್ಲಿ ಮೇಲ್ಕಂಡ ಸರ್ಕಾರದ ದಿನಾಂಕ: 11-11-2011ರ ಮಾರ್ಗಸೂಚಿಯನ್ನು ಹಿಂಪಡೆದು, ಈ ಕೆಳಕಂಡಂತೆ ಹೊಸ ನಿಯೋಜನಾ ನೀತಿಯನ್ನು/ ಮಾರ್ಗಸೂಚಿಗಳನ್ನು ರೂಪಿಸಿ ಆದೇಶಿಸಿದೆ.

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಎರವಲು ಸೇವೆಯ ಮೇಲೆ ವಿವಿಧ ವೃಂದದ ಹುದ್ದೆಗಳಿಗೆ ನಿಯೋಜಿಸುವ ಕುರಿತು ನಿರ್ಣಯಗಳು ಕಡ್ಡಾಯವಾಗಿ ಸರ್ಕಾರದ ಅಧಿಕಾರಕ್ಕೆ ಒಳಪಟ್ಟಿದ್ದು ಬಿ.ಬಿ.ಎಂ.ಪಿ.ಯು ಯಾವುದೇ ಸಂದರ್ಭದಲ್ಲಿ ಸರ್ಕಾರದ ಅನುಮೋದನೆಯನ್ನು ನಿರೀಕ್ಷಿಸಿ ನಿಯೋಜನೆ, ನೇಮಕ ಅಥವಾ ನಿಯೋಜಿತರ ಸೇವೆಯನ್ನು ಮುಂದುವರಿಕೆ ಮಾಡಿಕೊಳ್ಳಲು ಅವಕಾಶ ಇರುವುದಿಲ್ಲ.

2. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಎರವಲು ಸೇವೆಯ ಮೇಲೆ ವಿವಿಧ ವೃಂದದ ಹುದ್ದೆಗಳಿಗೆ ನಿಯೋಜಿಸುವ ಕುರಿತು ನಿರ್ಣಯಗಳು ಬಿ.ಬಿ.ಎಂ.ಪಿ.ಯ ಚಾಲ್ತಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಕಡ್ಡಾಯವಾಗಿ ಅನುಗುಣವಾಗಿ ಇರತಕ್ಕದ್ದು. ಸದರಿ ನಿಯಮಗಳಲ್ಲಿ ಸೂಚಿಸಲಾಗಿರುವಂತೆ ನಿರ್ಧಿಷ್ಟ ವೃಂದಗಳಿಗೆ ನಿರ್ಧಿಷ್ಟ ಇಲಾಖೆಗಳಿಂದ ಮಾತ್ರ ಎರವಲು ಸೇವೆಯ ಮೇಲೆ ನೇಮಕಾತಿ ಮಾಡತಕ್ಕದ್ದು. ನಿರ್ಧಿಷ್ಟ ಇಲಾಖೆಗಳಿಂದ ಎರವಲು ಸೇವೆಯ ಮೇಲೆ ಅಧಿಕಾರಿಗಳು ಲಭ್ಯರಿಲ್ಲದಿದ್ದಲ್ಲಿ <u>**ಸಮುಚಿತ ಪ್ರಾಧಿಕಾರವು**</u> ಬಿ.ಬಿ.ಎಂ.ಪಿ. ವೃಂದದ ಅಧಿಕಾರಿಗಳಿಗೆ ತಾತ್ಕಾಲಿಕವಾಗಿ ಹೆಚ್ಚುವರಿ ಪ್ರಭಾರ ವಹಿಸಿ, ಸದರಿ ಹುದ್ದೆಗಳನ್ನು ನಿರ್ವಹಿಸತಕ್ಕದ್ದು. ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸದ ಇತರೇ ಇಲಾಖೆಯ ಅಧಿಕಾರಿಗಳನ್ನು ಆ ಹುದ್ದೆಗೆ ನಿಯೋಜಿಸುವಂತಿಲ್ಲ.

3. ಯಾವುದೇ ವೃಂದದ ಅಧಿಕಾರಿ/ನೌಕರರು ಮಾತೃ ಇಲಾಖೆಯಲ್ಲಿ ನೇಮಕಾತಿ ಹೊಂದಿದ ನಂತರ, ಪರೀಕ್ಷಾರ್ಥ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿದ ತರುವಾಯ, ಕನಿಷ್ಠ 02 ವರ್ಷಗಳ ಸೇವೆಯನ್ನು ಮಾತೃ ಇಲಾಖೆಯಲ್ಲಿ ಸಲ್ಲಿಸಿದ ನಂತರವಷ್ಟೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿಯೋಜಿಸಲು ಪರಿಗಣಿಸುವುದು.

...3.

4. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ 2020ರ 97 ಮತ್ತು 98ನೇ ಪರಿಚ್ಛೇದಗಳಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರವು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿವಿಧ ವೃಂದಗಳಿಗೆ ಅಧಿಕಾರಿ/ನೌಕರರನ್ನು ನಿಯೋಜಿಸಬಹುದು. ಅಂತಹ ಸಂದರ್ಭದಲ್ಲಿ ನಿಯೋಜನೆಯಿಂದ ತುಂಬಬಹುದಾದ ಹುದ್ದೆಗಳಿಗೆ ಅಧಿಕಾರಿ/ನೌಕರರನ್ನು ನಿಯೋಜಿಸುವ/ ವರ್ಗಾಯಿಸುವ ಮುಂಚೆ ಸಂಬಂಧಪಟ್ಟ ಇಲಾಖೆಗಳು ನಗರಾಭಿವೃದ್ಧಿ ಇಲಾಖೆಯ / ಬಿಬಿಎಂಪಿ ಶಾಖೆಯ ಸಹಮತಿ ಪಡೆದ ನಂತರವೇ ನೌಕರರನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಮರುಸ್ಥಳ ನಿಯುಕ್ತಿಗೊಳಿಸಲು ಅವರ ಸೇವೆಯನ್ನು ನಗರಾಭಿವೃದ್ಧಿ ಇಲಾಖೆಗೆ ನೀಡುವುದು.

5. ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 16 ಎಸ್‌ಡಿಇ 83, ದಿನಾಂಕ: 16-07-1983 ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 50(3) ಹಾಗೂ 419 (ಬಿ) ಪ್ರಕಾರ ಎಲ್ಲಾ ಅಧಿಕಾರಿ/ನೌಕರರ ನಿಯೋಜನಾ ಅವಧಿ ಗರಿಷ್ಠ ಐದು ವರ್ಷಗಳಿಗೆ (3 ವರ್ಷಗಳು + 2 ವರ್ಷಗಳು) ಮಾತ್ರ ಕಡ್ಡಾಯವಾಗಿ ಮಿತಿಗೊಳಿಸಿದೆ.

6. ನಿಗದಿತ ನಿಯೋಜನಾ ಅವಧಿ ಮುಗಿದ ನಂತರ, ಅಂತಹ ಅಧಿಕಾರಿ/ನೌಕರರನ್ನು ಬಿ.ಬಿ.ಎಂ.ಪಿ.ಯ ಪ್ರಭಾರದಿಂದ ಬಿಡುಗಡೆ ಮಾಡಿ ಮಾತೃ ಇಲಾಖೆಗೆ ಹಿಂತಿರುಗಿಸತಕ್ಕದ್ದು. ನಿಗದಿತ ನಿಯೋಜನಾ ಅವಧಿಯು ಮುಗಿದ ನಂತರ ಅಧಿಕಾರಿ/ನೌಕರರಿಗೆ ಬಿ.ಬಿ.ಎಂ.ಪಿ.ಯಿಂದ ವೇತನ ನೀಡತಕ್ಕದ್ದಲ್ಲ. ಒಂದು ವೇಳೆ ನಿಗಧಿತ ನಿಯೋಜನಾ ಅವಧಿ ಮುಗಿದ ನಂತರ ಅಧಿಕಾರಿ/ನೌಕರರಿಗೆ ವೇತನ ನೀಡಿದ್ದು ಅಥವಾ ಆನಂತರದಲ್ಲಿ ಸರ್ಕಾರದ ನಿರ್ದಿಷ್ಟ ಅನುಮತಿ ಇಲ್ಲದೇ ಕಡ್ಡಾಯ ನಿರೀಕ್ಷಣಾ ಅವಧಿಯೆಂದು ಪರಿಗಣಿಸಿ ವೇತನ ನೀಡಿರುವುದು ಕಂಡುಬಂದಲ್ಲಿ ಸಂಬಂಧಪಟ್ಟ ಸಂಬಳ ಸೆಳೆಯುವ ಬಟವಾಡೆ ಅಧಿಕಾರಿಯಿಂದ ಸದರಿ ಮೊತ್ತವನ್ನು ವಸೂಲು ಮಾಡತಕ್ಕದ್ದು.

7. ಬಿ.ಬಿ.ಎಂ.ಪಿ.ಯು ಯಾವುದೇ ಸಂದರ್ಭದಲ್ಲಿ ಸರ್ಕಾರದ ಅನುಮೋದನೆಯನ್ನು ನಿರೀಕ್ಷಿಸಿ, ನೇಮಕ ಮಾಡಿಕೊಳ್ಳಲಿಕ್ಕೆ / ಮುಂದುವರೆಸಲು ಅವಕಾಶ ಇರುವುದಿಲ್ಲ.

8. ಯಾವುದೇ ಅಧಿಕಾರಿ/ನೌಕರರ ಮೇಲೆ ಗಂಭೀರವಾದ ಆರೋಪಗಳು ಇದ್ದು, ಮಾತೃ ಇಲಾಖೆಗೆ ಹಿಂದಿರುಗಿಸಿದ್ದಲ್ಲಿ, ಪುನರ್-ನಿಯೋಜನೆ ನಂತರ ಅಂತಹ ಅಧಿಕಾರಿ/ನೌಕರರನ್ನು ಈ ಹಿಂದಿನ ಹುದ್ದೆಯಲ್ಲಿ ಮುಂದುವರೆಸತಕ್ಕದ್ದಲ್ಲ.

9. ಬಿಬಿಎಂಪಿಯ ವಿವಿಧ ಹುದ್ದೆಗಳಿಗೆ ನಿಯೋಜಿತರಾಗುವ ಅಧಿಕಾರಿಗಳನ್ನು ಯಾವುದೇ ಸಂದರ್ಭದಲ್ಲಿ ಬಿ.ಬಿ.ಎಂ.ಪಿ.ಯ ವೃಂದದ ಹುದ್ದೆಗಳಲ್ಲಿ ವಿಲೀನ ಮಾಡಲು ಪ್ರಸ್ತಾವನೆಗಳನ್ನು ಸಲ್ಲಿಸತಕ್ಕದಲ್ಲ.

...4.

10. 05 ವರ್ಷಗಳ ಗರಿಷ್ಠ ನಿಯೋಜನಾ ಅವಧಿಯನ್ನು ಪೂರ್ಣಗೊಳಿಸಿದ ಎಲ್ಲಾ ವೃಂದದ ಅಧಿಕಾರಿ/ನೌಕರರುಗಳನ್ನು ಕೂಡಲೇ ಮಾತೃ ಇಲಾಖೆಗೆ ಹಿಂದಿರುಗಿಸತಕ್ಕದ್ದು.

11. ಬಿಬಿಎಂಪಿಯ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಲ್ಲಿ, ನಗರ ಮತ್ತು ಗ್ರಾಮಾಂತರ ಯೋಜನಾ ವಿಭಾಗಕ್ಕೆ ಮಿಸಲಿರಿಸಿದ ಹುದ್ದೆಗಳನ್ನು, ತಾಂತ್ರಿಕ ನೈಪುಣ್ಯತೆ ಹೊಂದಿರುವ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದಲೇ ಆದ್ಯತೆ ಮೇರೆಗೆ ನಿಯೋಜಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎಸ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.(ಬಿ.ಬಿ.ಎಂ.ಪಿ)

07/01/22

ಗೆ:

ಸಂಕಲನಕಾರರು, ಸರ್ಕಾರಿ ಕೇಂದ್ರ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು– ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಲಾಗಿದೆ.

ಪ್ರತಿ:

1) ಮಹಾಲೇಖಪಾಲರು (A&E)/(G&SSA)/(E&RSA), ಕರ್ನಾಟಕ, ಬೆಂಗಳೂರು.
2) ಮಾನ್ಯ ಮುಖ್ಯ ಮಂತ್ರಿಯವರು ಪ್ರಧಾನ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿಯವರು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
7) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
9) ಸರ್ಕಾರದ ಪ್ರಧಾನ, ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10) ಸರ್ಕಾರದ ಪ್ರಧಾನ, ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11) ಸರ್ಕಾರದ ಪ್ರಧಾನ, ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
12) ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
13) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು ಅರಣ್ಯ ಪಡೆ) ಅರಣ್ಯ ಭವನ, ಬೆಂಗಳೂರು.
14) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಬೆಂಗಳೂರು.
15) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
16) ಆಯುಕ್ತರು, ಪಶುವೈದ್ಯ ಮತ್ತು ಪಶುಪಾಲನ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.

. . .5.

17) ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಕಾವೇರಿ ಭವನ, ಬೆಂಗಳೂರು.
18) ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
19) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
20) ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು.
21) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
22) ಸರ್ಕಾರದ ಜಂಟಿ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
23) ಸರ್ಕಾರದ ಉಪ ಕಾರ್ಯದರ್ಶಿ-1, 2 ಮತ್ತು 3, ನಗರಾಭಿವೃದ್ಧಿ ಇಲಾಖೆ,
24) ಸರ್ಕಾರದ ಎಲ್ಲಾ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
25) ಇಲಾಖೆಯ ಅಂತರ್ ಜಾಲತಾಣ/ ವಾರ್ಷಿಕ ಕಂಪೆಂಡಿಯಂ
26) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.